ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ರಾಜ್ಯದಲ್ಲಿ ಸಹಕಾರ ಇಲಾಖೆಯಲ್ಲಿ ರೈತರಿಗಾಗಿ ಇರುವ ಸಾಲ ಯೋಜನೆಗಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):-

196(263) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳು ಯಾವುವು;(ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ; ಸಬ್ಸಿಡಿಯನ್ನು ಎಷ್ಟು ನೀಡಲಾಗುತ್ತದೆ? (ವಿವರ ನೀಡುವುದು)